**CC 659/2014**
**PW.8**

**ದಿಃ 01.12.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಪಾಟೀ ಸವಾಲುಃ</u> ಆರೋಪಿತರ ಪರ ಶ್ರೀ ವಿ.ಸಿ., ವಕೀಲರಿಂದ**

ಸ್ಥಳದಲ್ಲಿ ಮುದ್ದೆ ಮಾಲ-1 ರಿಂದ 3 ಪಿರ್ಯಾದಿಯೇ ನನಗೆ ನೀಡಿದ್ದರು. ಪಂಚರಿಗೆ ನಾನು ಲಿಖಿತ ನೋಟೀಸ್ ಕೊಟ್ಟಿರಲಿಲ್ಲ. ಪಂಚರಿಗೂ, ಪಿರ್ಯಾದಿಗೂ ಹಾಗೂ ಆರೋಪಿತರ ನಡುವೆ ಯಾವ ಸಂಬಂಧ ಎಂದು ನಾನು ತಿಳಿದುಕೊಳ್ಳಲು ಪ್ರಯತ್ನಿಸಿಲ್ಲ. ನಾನು ಚಾಸಾ-2 ರಿಂದ 8 ರವರ ಹೇಳಿಕೆಗಳನ್ನು ದಾಖಲೆಗಳನ್ನು ದಾಖಲಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಕೃತ್ಯ ನಡೆದ ಪಹಣಿಯನ್ನು ಸಂಬಂಧಿಸಿದ ಕಛೇರಿಯಿಂದ ಪಡೆದುಕೊಂಡಿರುತ್ತೇನೆ. ಕೃತ್ಯ ನಡೆದ ಸ್ಥಳದ ಸರ್ವೇ ನಂಬರ್ ಗ್ರಾಮದ ಜಾಗವಾಗಿದ್ದು, ಅದರಿಂದಿ ತಿಳಿಯಿತು. ಕೃತ್ಯ ನಡೆದ ಸ್ಥಳಕ್ಕೆ ಸಂಬಂಧಿಸಿದ ಸಿವಿಲ್ ವ್ಯಾಜ್ಯಗಳ ಬಗ್ಗೆ ನಾನು ಪರಿಶೀಲಿಸಿಲ್ಲ. ನಿಪಿ-8 ರಲ್ಲಿ ಓ.ಎಸ್ 425/2007 ಎಂದು ದಾಖಲಾಗಿರುತ್ತದೆ ಎಂದರೆ ಸರಿ. ಸದರಿ ದಾವೆಯ ಬಗ್ಗೆ ನಾನು ವಿಚಾರಣೆ ಮಾಡಿಲ್ಲ. ನಿಪಿ-7 ಗಾಯದ ಪ್ರಮಾಣ ಪತ್ರವನ್ನು ವೈದ್ಯಾಧಿಕಾರಿಗಳಿಂದ ಪಡೆದುಕೊಂಡಿರುತ್ತೇನೆ. ವೈದ್ಯಾಧಿಕಾರಿಯಿಂದ ಚಿಕಿತ್ಸೆ ಪಡೆದವರ ಹೊರರೋಗಿಗೆ ಸಂಬಂಧಿಸಿದ ದಾಖಲೆ ಅಥವಾ ರಶೀದಿಗಳನ್ನು ಪಡೆದುಕೊಳ್ಳಲು ನನಗೆ ತೊಂದರೆ ಇರಲಿಲ್ಲ ಎಂದರೆ ಸರಿ. ಚಾಸಾ-1 ರವರು ಕೊಟ್ಟಂತಹ ಸುಳ್ಳು ಪಿರ್ಯಾದಿನ ಮೇಲೆ ನಾನು ಠಾಣಾ ಅಂಕಿ ಸಂಖ್ಯೆಗಾಗಿ ನಾನು ಆರೋಪಿತರ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿಕೊಂಡು ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಘಟನಾ ಸ್ಥಳಕ್ಕೆ ಹೋಗಿರುವುದಿಲ್ಲ ಹಾಗೂ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುವುದಿಲ್ಲ, ಪಿರ್ಯಾದಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u> ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖ ರೀತ್ಯಾ ಬೆರಳಚ್ಚುಗಾರರಿಂದ ಗಣಕಯಂತ್ರದಲ್ಲಿ ಮುದ್ರಿಸಲಾಯಿತು)**

**ಓ ಹೇ ಕೇ ಸ ಇದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**